ಮೈಸೂರ ಗೆಜಿಟ್.

ನಂ. 42.] ಸರಕಾರದಿಂದ ಘಾಯಿಷ್ ಆದ್ದು. [ನಂ. 3.

ಬೆಂಗಳೂರು, ಗುರುವಾರ, ಜನವರಿ ತಾ|| 17, ಸ್ಯ 1907.

☞ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೆ ಭಾಗ–ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ–ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ವ ಇನಾಂ. ಸೂಪರಿಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಂಟ್ರೋಲರವರು, ಪಬ್ಲಿಕ್‌ವರ್ಕಸ್ ಆಫಿಸರಿಗಳು, ಫಾರೆಸ್ಟ್ಟು, ರೆಜಿಸ್ಟ್ರೇರ್ಸ ವ ಎಡ್ಯುಕೇರ್ಸ ಇನ್‌ಸ್ಪೆಕ್ಟರ ಜನರಲ್ಲವರು, ಮ್ಯುನಿಸಿಪಲ್‌ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆಷನ್ಸ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು; ಸಬ್‌ಆರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರಿಂಟೆಂಡೆಂಟರು, ಫಾರೆಸ್ಟ್ಟು ಆಫಿಸರುಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟ್ಮಾಸ್ಟರ್ ನೋಟಿಸುಗಳು.

3ನೆ ಭಾಗ–ಲೆಜಿಸ್‌ಲೇಟಿವ್ ರೆಗ್ಯುಲೇಷನ್‌ಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು.

4ನೆ ಭಾಗ–ಸರ್ಕಾರೀ ಕಾಗದ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮರ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 3ನೆ ಜನವರಿ 1907.

ನಂ. 5968—ಸ್ಯಾನಿಟರಿ 141–06—4, ತುಮಕೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮರ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು. ಇಂದ.	ತಾರೀಖು. ಗೆ.
1. ಶ್ರೀಗುರು ಗುಂಡಬ್ರಹ್ಮೇಶ್ವರ ಜಾತ್ರೆ.	ಪಾಟನಾಯಕನಹಳ್ಳಿ ...	ಸೀರ್ಯ ...	18—1—07	28—1—07
2. ಶ್ರೀ ನರಸಿಂಹಸ್ವಾಮಿ ರಥೋತ್ಸವ ಮತ್ತು ಜಾತ್ರೆ.	ಸೀಬಿ ...	ಪಿಟೋ ...	1—2—07	25—2—07

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮರ್ ಮಹಾರಾಜರವರ ಸರ್ಕಾರದವರು ಪ್ರತಿಬಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.